**ಕರ್ನಾಟಕ ಸರ್ಕಾರ**

ನಂ.ಗ್ರಾಅಪ 513 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 22-07-2017

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯತಿಗಳ ಸಂಪನ್ಮೂಲ ಕ್ರೋಡೀಕರಣದಲ್ಲಿ ಗ್ರಾಮ ಪಂಚಾಯತಿ ಸದಸ್ಯರುಗಳು ಭಾಗವಹಿಸುವ ಬಗ್ಗೆ.

*******

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ಜಾರಿಗೊಳಿಸುವ ಮೂಲಕ ಹಾಗೂ ವಿಕೇಂದ್ರಿಕರಣದ ತತ್ವಕ್ಕನುಸಾರವಾಗಿ ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ, ಪ್ರಕಾರ್ಯಗಳು ಹಾಗೂ ಸಿಬ್ಬಂದಿಗಳನ್ನು ಹಸ್ತಾಂತರಿಸಲಾಗಿದೆ. ಆಯಾ ಪ್ರಕಾರ್ಯಗಳನ್ನು ಆಯಾ ಹಂತಗಳಲ್ಲಿಯೇ ಅನುಷ್ಠಾನಗೊಳಿಸಲು ಅನುವಾಗುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಎಲಾ ಯೋಜನೆಗಳನ್ನು ಗ್ರಾಮ ಪಂಚಾಯತಿಯಿಂದ ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ವಹಿಸಿದ್ದು, ಅದರಂತೆ ಪ್ರತಿ ಯೋಜನೆಯ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯತಿಗೆ ಬಿಡುಗಡೆ ಮಾಡಲಾಗುತ್ತಿದೆ. ಇದರಿಂದಾಗಿ ಗ್ರಾಮ ಪಂಚಾಯತಿಗಳು ಪರಿಣಾಮಕಾರಿಯಾಗಿ ಸ್ಥಳೀಯ ಸರ್ಕಾರದಂತೆ ಕಾರ್ಯನಿರ್ವಹಿಸಬೇಕಾಗಿದ್ದು, ಅವುಗಳ ಜವಾಬ್ದಾರಿ ಮತ್ತು ಕರ್ತವ್ಯಗಳು ಹೆಚ್ಚಾಗಿವೆ.

ಸದರಿ ಅಧಿನಿಯಮದ ಪ್ರಕರಣ 58 ರಲ್ಲಿ ಗ್ರಾಮ ಪಂಚಾಯತಿಯ ಕಡ್ಡಾಯ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದ್ದು, ಅದರಲ್ಲಿ ಗ್ರಾಮ ಪಂಚಾಯತಿ ವಿಧಿಸಬಹುದಾದ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ನಿಯತಕಾಲಿಕವಾಗಿ ಪರಿಶೀಲಿಸುವುದು ಮತ್ತು ವಸೂಲು ಮಾಡುವುದು ಗ್ರಾಮ ಪಂಚಾಯತಿಯ ಪ್ರಮುಖ ಕಡ್ಡಾಯ ಕಾರ್ಯವಾಗಿರುತ್ತದೆ. ಹೀಗಿದ್ದಾಗಿಯೂ ರಾಜ್ಯದ ಕೆಲವು ಗ್ರಾಮ ಪಂಚಾಯತಿಗಳಲ್ಲಿ ವಾರ್ಷಿಕವಾಗಿ ನಿಗಧಿಪಡಿಸಿದ ಬೇಡಿಕೆಯ ತೆರಿಗೆಗಳು ನಿಗದಿತ ಪ್ರಮಾಣದಲ್ಲಿ ವಸೂಲಾತಿಯಾಗದಿರುವುದು ಕಂಡು ಬಂದಿರುತ್ತದೆ.

ಸದರಿ ಅಧಿನಿಯಮದ ಪ್ರಕರಣ 199 ರಲ್ಲಿ ಗ್ರಾಮ ಪಂಚಾಯತಿಗಳು ಪಂಚಾಯತಿ ಪ್ರದೇಶದ ಪರಿಮಿತಿಗೊಳಗಿರುವ **ಕೃಷಿ ತೆರಿಗೆ ನಿರ್ಧಾರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ** ಹಾಗೂ ಗ್ರಾಮ ಪಂಚಾಯತಿಯು ಕುಡಿಯುವುದಕ್ಕೆ ಮತ್ತು ಇತರ ಉದ್ದೇಶಗಳಿಗಾಗಿ ನೀರು ಸರಬರಾಜು ಮಾಡಲು ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರರಕಣ 199 ರಂತೆ ಗ್ರಾಮ ಪಂಚಾಯತಿಗಳು ತೆರಿಗೆ ಮತ್ತು ಶುಲ್ಕವನ್ನು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವಂತೆ ಹಾಗೂ ನಿಯಮಿಸಬಹುದಾದಂತ ಯಾವುದೇ ಇತರೆ ಶುಲ್ಕವನ್ನು ವಿಧಿಸಿ, ವಸೂಲಿ ಮಾಡಬಹುದಾಗಿದೆ.

ಸದರಿ ಅಧಿನಿಯಮದ ಪ್ರಕರಣ 199 ಎ ರನ್ವಯ ಗ್ರಾಮ ಪಂಚಾಯತಿಯು 199ನೇ ಪ್ರಕರಣದ ಅಡಿಯಲ್ಲಿ ವಿಧಿಸಬಹುದಾದ ತೆರಿಗೆಗಳು ಮತ್ತು ದರಗಳನ್ನು, ಕಟ್ಟಡಗಳು ಮತ್ತು ಕೃಷಿಯೇತರ ಭೂಮಿಯ ಸಂಬಂಧದಲ್ಲಿ ಕನಿಷ್ಠ 2 ವರ್ಷಗಳಿಗೊಮ್ಮೆ ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿದ ಇತರ ಬಾಬ್ತುಗಳ ಮೇಲೆ ವರ್ಷದಲ್ಲಿ ಕನಿಷ್ಠ ಒಮ್ಮೆ ಪರಿಷ್ಕರಿಸತಕ್ಕದ್ದು, **ಸದರಿ ಅಧಿನಿಯಮದ ಪ್ರಕರಣ 200 ರನ್ವಯ ಬಾಕಿಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗಬೇಕಾಗಿರುವ ತೆರಿಗೆಗಳು ವಸೂಲಿ ಮಾಡುವುದು ಗ್ರಾಮ ಪಂಚಾಯತಿಗಳ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ ಮತ್ತು ವಸೂಲು ಆಗಬೇಕಾಗಿರುವ ತೆರಿಗೆಯಲ್ಲಿ ಶೇ 80 ರಷ್ಟು ಕಡಿಮೆ ವಸೂಲಾತಿಯಾಗಿದ್ದರೆ ಹಾಗೆ ಕಡಿಮೆ ವಸೂಲಾತಿಯಾಗಿರುವುದಕ್ಕೆ ಕಾರಣಗಳ ಬಗ್ಗೆ ಗ್ರಾಮ ಪಂಚಾಯತ್ ತನಿಖೆ ಮಾಡಿ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದೆಂದೂ ಸೂಚಿಸಿದೆ.**

ಗ್ರಾಮ ಪಂಚಾಯತಿಗಳ ತೆರಿಗೆ ಸಂಗ್ರಹದಲ್ಲಿ ಚುನಾಯಿತ ಪ್ರತಿನಿಧಿಗಳ ಪಾತ್ರ ಪ್ರಮುಖವಾಗಿದ್ದು, ಗ್ರಾಮ ಪಂಚಾಯತಿ ಸದಸ್ಯರುಗಳು ತಮ್ಮ ವ್ಯಾಪ್ತಿಯಲ್ಲಿ ಸಂಗ್ರಹವಾಗಬೇಕಾದ ತೆರಿಗೆ ವಸೂಲಾತಿ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಪೂರ್ಣ ಪ್ರಮಾಣದಲ್ಲಿ ತೆರಿಗೆ ವಸೂಲಾತಿಗೆ ನೆರವಾಗಬೇಕು.

ಗ್ರಾಮ ಪಂಚಾಯತಿಗಳು ತೆರಿಗೆಗಳನ್ನು ವಿಧಿಸುವ, ಪರಿಷ್ಕರಿಸುವ ಹಾಗೂ ದರಗಳು ಮತ್ತು ಶುಲ್ಕವನ್ನು ವಿಧಿಸುವ ಬಗ್ಗೆ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈಗಾಗಲೇ ಹಲವಾರು ಸರ್ಕಾರದ ಸುತ್ತೋಲೆಗಳ ಮೂಲಕ ನಿರ್ದೇಶನ ನೀಡಲಾಗಿದೆ.

ಆದುದರಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ಸಂಪನ್ಮೂಲ ಕ್ರೋಢೀಕರಣ ಮಾಡಲು ಈ ಕೆಳಕಂಡಂತೆ ಕ್ರಮ ವಹಿಸುವಂತೆ ಸೂಚಿಸಿದೆ.

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199, 199-ಎ ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿದಂತೆ ಗ್ರಾಮ ಪಂಚಾಯತಿಗಳು ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಿಧಿಸಲು, ವಸೂಲಿ ಮಾಡಲು ಮತ್ತು ಪರಿಷ್ಕರಿಸಲು ಕ್ರಮ ಕೈಗೊಳ್ಳತಕ್ಕದ್ದು.
2. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಭೂಮಿ ಮತ್ತು ಕಟ್ಟಡಗಳ ಮಾಲೀಕರು ಬಾಕಿ ಉಳಿಸಿಕೊಂಡಿರುವ ತೆರಿಗೆಗಳನ್ನು ಪಾವತಿಸುವಂತೆ ಮನವೊಲಿಸುವುದು.
3. ಬಾಕಿ ಇರುವ ತೆರಿಗೆಗಳನ್ನು ಪಾವತಿಸಿಕೊಳ್ಳಲು ಗ್ರಾಮ ಪಂಚಾಯತಿ ಮಟ್ಟದಲ್ಲಿ ಆಂದೋಲನ ನಡೆಸುವುದು.
4. ಸದರಿ ಅಧಿನಿಯಮದ ಪ್ರಕರಣ 200 ರನ್ವಯ ಬಾಕಿಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗಬೇಕಾಗಿರುವ ತೆರಿಗೆಗಳು ವಸೂಲಿ ಮಾಡುವುದು ಗ್ರಾಮ ಪಂಚಾಯತಿಗಳ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ ಮತ್ತು ವಸೂಲು ಆಗಬೇಕಾಗಿರುವ ತೆರಿಗೆಯಲ್ಲಿ ಶೇ 80 ರಷ್ಟು ಕಡಿಮೆ ವಸೂಲಾತಿಯಾಗಿದ್ದರೆ ಹಾಗೆ ಕಡಿಮೆ ವಸೂಲಾತಿಯಾಗಿರುವುದಕ್ಕೆ ಕಾರಣಗಳ ಬಗ್ಗೆ ಗ್ರಾಮ ಪಂಚಾಯತ್ ತನಿಖೆ ಮಾಡಿ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದ್ದು.
5. ತಪ್ಪಿತಸ್ಥರಿಗೆ ಬೇಡಿಕೆ ನೋಟೀಸುಗಳನ್ನು ನೀಡುವುದು ಹಾಗೂ ದಂಡವನ್ನು ವಿಧಿಸಿ ತೆರಿಗೆಗಳನ್ನು ವಸೂಲಿ ಮಾಡತಕ್ಕದ್ದು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 145 ರಲ್ಲಿ ತಾಲ್ಲೂಕು ಪಂಚಾಯತಿಯ ಕಡ್ಡಾಯ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದ್ದು, ಅದರಲ್ಲಿ ತಾಲ್ಲೂಕಿನೊಳಗಿನ ಗ್ರಾಮ ಪಂಚಾಯತಿಗಳ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಸೂಲು ಮಾಡುವುದು ಮತ್ತು ಅವುಗಳ ಪರಿಷ್ಕರಣೆ ಬಗ್ಗೆ ಮೇಲ್ವಿಚಾರಣೆ ಮಾಡುವುದು ತಾಲ್ಲೂಕು ಪಂಚಾಯತಿಯ ಪ್ರಮುಖ ಕಡ್ಡಾಯ ಕಾರ್ಯವಾಗಿರುತ್ತದೆ.

ಮೇಲ್ಕಂಡಂತೆ ಗ್ರಾಮ ಪಂಚಾಯತಿಗಳು ಕ್ರಮ ವಹಿಸಿರುವ ಬಗ್ಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 232 ರಂತೆ ಪರಿವೀಕ್ಷಣೆ ಮತ್ತು ಮೇಲ್ವಿಚಾರಣೆ ಮಾಡತಕ್ಕದ್ದೆಂದೂ ಸಹ ತಿಳಿಸಿದೆ.

**(ಎಂ.ಕೆ. ಕೆಂಪೇಗೌಡ)**
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

<u>ಪ್ರತಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.